# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 516 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ,<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 09.03.2020 |
| ಉತ್ತರಿಸುವ ಸಚಿವರು | : | ಮಾನ್ಯ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು. |

<table>
<tr><th>ಪ್ರಶ್ನೆ</th><th>ಉತ್ತರ</th></tr>
<tr><td>ಅ) 2015-16ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಐ.ಟಿ ಪಾರ್ಕ್ ಮತ್ತು Incubation centreಗಾಗಿ ಎಷ್ಟು ಅನುದಾನ ಬಜೆಟ್‌ನಲ್ಲಿ ಘೋಷಿಸಲಾಗಿತ್ತು; ತಾಂತ್ರಿಕ ಕಾರಣಗಳಿಂದ ಈ ಯೋಜನೆಗೆ ಕೃತಕ್ಷಿರುವ ವಿಷಯ ಸರ್ಕಾರದ ಗಮನಕ್ಕಿದೆಯೇ; ಇದ್ದಲ್ಲಿ, ಈ ಯೋಜನೆ ಪ್ರಾರಂಭಿಸುವ ಯೋಚನೆ ಸರ್ಕಾರದ ಮುಂದಿದೆಯೇ;</td><td rowspan="2">2015-16ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಐ.ಟಿ ಪಾರ್ಕ್ ಮತ್ತು Incubation centre ಸ್ಥಾಪನೆ ಬಗ್ಗೆ ಆಯವ್ಯಯದಲ್ಲಿ ಯಾವುದೇ ಅನುದಾನ ಘೋಷಣೆ ಆಗಿರುವುದಿಲ್ಲ.<br><br>ಆದರೆ, 2016-17ನೇ ಸಾಲಿನ ರಾಜ್ಯ ಆಯವ್ಯಯದಲ್ಲಿ ಬೀದರ್‌ನಲ್ಲಿ ಹೊಸ ಐಟಿ ಪಾರ್ಕ್-ಇನ್ಕ್ಯುಬೇಟರ್‌ಗಳನ್ನು ಸ್ಥಾಪಿಸಲು ಪೂರ್ವಭಾವಿ ಸಿದ್ಧತೆ ಮಾಡಲಾಗುವುದೆಂದು ಘೋಷಿಸಲಾಗಿರುತ್ತದೆ. ಆದರೆ, ಈ ಯೋಜನೆಗಾಗಿ ಸದರಿ ಆಯವ್ಯಯದಲ್ಲಿ ಯಾವುದೇ ಅನುದಾನವನ್ನು ಘೋಷಿಸಲಾಗಿರುವುದಿಲ್ಲ.<br><br>ಬೀದರ್ ನಲ್ಲಿ ನವೋದ್ಯಮಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ, ಯುವ ವಿದ್ಯಾರ್ಥಿಗಳ ಹೊಸ ಪರಿಕಲ್ಪನೆಗಳನ್ನು ಪರಿಪೋಷಿಸಲು ಹಾಗೂ ಉತ್ತೇಜಿಸುವ ಸಲುವಾಗಿ ಸರ್ಕಾರದ ವತಿಯಿಂದ ಬೀದರ್‌ನ ಗುರುನಾನಕ್ ದೇವ್ ಕಾಲೇಜ್ ಆಫ್ ಇಂಜಿನಿಯರಿಂಗ್ ನಲ್ಲಿ ನ್ಯೂ ಏಜ್ ಸೆಂಟರ್ ಅನ್ನು ಸ್ಥಾಪಿಸಲಾಗಿರುತ್ತದೆ.<br><br>ಈ ನ್ಯೂ ಏಜ್ Incubation centre ಬೀದರ್ ನ ವಿದ್ಯಾರ್ಥಿಗಳಿಗೆ ತಮ್ಮ ಸಾಹಸಿಕತೆ ಹಾಗೂ ಆವಿಷ್ಕಾರಗಳನ್ನು ಅಭಿವೃದ್ಧಿಪಡಿಸಲು ಇನ್ಕ್ಯುಬೇಷನ್ ಹಾಗೂ ಪ್ರೋಟೋಟೈಪಿಂಗ್ ಸೌಲಭ್ಯಗಳನ್ನು ಮತ್ತು ನವೋದ್ಯಮಗಳನ್ನು ಅಭಿವೃದ್ಧಿಪಡಿಸಲು ಬೇಕಾಗಿರುವ ಮಾರ್ಗದರ್ಶನ ಹಾಗೂ ಬೆಂಬಲವನ್ನು ಒದಗಿಸುತ್ತಿದೆ.</td></tr>
<tr><td>ಆ) ಹಾಗಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು; ಇಲ್ಲದಿದ್ದಲ್ಲಿ ಕಾರಣವೇನು?</td></tr>
</table>

ಸಂಖ್ಯೆ: ಐಟಿಬಿಟಿ 07 ಎಲ್.ಸಿ.ಎಂ. 2020

(ಡಾ|| ಅಶ್ವಥ್ ನಾರಾಯಣ ಸಿ. ಎನ್)
ಉಪಮುಖ್ಯಮಂತ್ರಿಗಳು ಹಾಗೂ
ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ
ಮತ್ತು ತಂತ್ರಜ್ಞಾನ ಸಚಿವರು